ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

*Office of the Registrar, Central College Campus, Dr. B.R. Ambedkar Veedhi, Bengaluru – 560 001.*
*PhNo.080-22131385, E-mail: registrarbcu@gmail.com*

ಸಂಖ್ಯೆ.ಬಿಸಿಯು/ಕು.ಸ.ಆ/ಎನ್‌ಇಪಿ/259 /2021–22 ದಿನಾಂಕ: 09.11.2021

## ಸುತ್ತೋಲೆ

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಎಂಟು ವಿಧಾನ ಸಭಾ ಕ್ಷೇತ್ರಗಳ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರುಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ –2020 ಕುರಿತಂತೆ ಒಂದು ದಿವಸದ ಓರಿಯೆಂಟೇಶನ್ ಕಾರ್ಯಕ್ರಮವನ್ನು ಆಯೋಜಿಸಿರುವ ಕುರಿತು

****

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020 ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು ಅದರ ಭಾಗವಾಗಿ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಹೆಬ್ಬಾಳ, ಶಿವಾಜಿನಗರ, ಚಾಮರಾಜಪೇಟೆ, ಬಿ.ಟಿ.ಎಂ. ಲೇಔಟ್ ಮತ್ತು ರಾಜಾಜಿನಗರ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಅಧ್ಯಾಪಕರುಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ 2020 ಕುರಿತಂತೆ ಅಗತ್ಯ ಮಾಹಿತಿ ನೀಡಲು ಎರಡನೇ ಹಂತದ ಓರಿಯೆಂಟೇಶನ್ ಕಾರ್ಯಕ್ರಮವನ್ನು **ದಿನಾಂಕ 16.11.2021 ರಂದು ಬೆಳಿಗ್ಗೆ 11.00 ಗಂಟೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜು ಆವರಣದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.** ಮೇಲೆ ನಮೂದಿಸಿದ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರು ಕಡ್ಡಾಯವಾಗಿ ಓರಿಯೆಂಟೇಶನ್ ಕಾರ್ಯಕ್ರಮದಲ್ಲಿ ಭಾಗವಹಿಸಲು ಕೋರಲಾಗಿದೆ.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿಯವರು, ಡಾ. ಟಿ. ಡಿ. ಕೆಂಪರಾಜು, ವಿಶ್ರಾಂತ ಕುಲಪತಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಶಿಕ್ಷಣ ನೀತಿ ಕಾರ್ಯಪಡೆಯ ಸದಸ್ಯರುಗಳು ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ಉಪನ್ಯಾಸ ನೀಡಲಿದ್ದಾರೆ.

ಕುಲಸಚಿವರು

ಗೆ,
ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಹೆಬ್ಬಾಳ, ಶಿವಾಜಿನಗರ, ಚಾಮರಾಜಪೇಟೆ, ಬಿ.ಟಿ.ಎಂ. ಲೇಔಟ್ ಮತ್ತು ರಾಜಾಜಿನಗರ, ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

ಪ್ರತಿ:
1. ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು
3. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
4. ಸನ್ಮಾನ್ಯ ಉನ್ನತ ಶಿಕ್ಷಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಶಿಕ್ಷಣ ನೀತಿ ಕಾರ್ಯಪಡೆಯ ಸದಸ್ಯರುಗಳು
6. ಎಲ್ಲಾ ಡೀನರುಗಳು / ಮುಖ್ಯಸ್ಥರು/ ಅಧ್ಯಾಪಕರು, ಬೆಂ.ನ.ವಿ, ಬೆಂಗಳೂರು
7. ಕುಲಪತಿಗಳು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ)/ ವಿತ್ತಾಧಿಕಾರಿಗಳ ಆಪ್ತ ಕಾರ್ಯದರ್ಶಿಗಳು, ಬೆಂ.ನ.ವಿ, ಬೆಂಗಳೂರು
8. ಕಛೇರಿ ಪ್ರತಿ / ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸಲು